ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	103
ಮಾನ್ಯ ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	15.07.2019
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ವಿದ್ಯಾರ್ಥಿಗಳಿಗೆ ಕಳೆದ ಒಂದು ವರ್ಷದಿಂದ ಶಿಷ್ಯವೇತನ ದೊರೆಯದೆ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿದ್ದು, ವಿದ್ಯಾರ್ಥಿಗಳಿಗೆ ಶಿಷ್ಯವೇತನ ತಲುಪದಿರಲು ಕಾರಣವೇನು;	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕವಿನಾಯಿತಿ ಹಾಗೂ ವಿದ್ಯಾಸಿರಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಅನುದಾನದ ಲಭ್ಯತೆ ಆಧರಿಸಿ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರಾತಿ ಮಾಡಲಾಗುತ್ತಿದೆ. 2018-19 ನೆ ಸಾಲಿನಲ್ಲಿನ ಅನುದಾನ ಲಭ್ಯತೆ ಆಧರಿಸಿ ಬೀದರ್ ಜಿಲ್ಲೆಯ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿದ್ದು, ಮಂಜೂರಾತಿ ವಿವರಗಳು ಕೆಳಕಂಡಂತಿವೆ.
ಆ)	ಇದಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?	ಮೇಲ್ಕಂಡಂತೆ ಮಂಜೂರಾತಿ ನೀಡಿರುವ ವಿದ್ಯಾರ್ಥಿವೇತನಗಳನ್ನು ವಿದ್ಯಾರ್ಥಿಗಳ/ವಿದ್ಯಾ ಸಂಸ್ಥೆಗಳ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ (DBT) ಮುಖಾಂತರ ವರ್ಗಾವಣೆಗೊಳಿಸಲಾಗಿದೆ.

ಕ್ರ. ಸಂ	ಕಾರ್ಯಕ್ರಮ	ಮಂಜೂರಾದ ವಿದ್ಯಾರ್ಥಿಗಳ ಸಂಖ್ಯೆ	ಮಂಜೂರಾತಿ ಮೊತ್ತ
1	ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ	32070	28752650
2	ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ	10609	22828000
3	ಶುಲ್ಕ ವಿನಾಯಿತಿ	1438	17953500
4	ವಿದ್ಯಾಸಿರಿ	18253	111252347

ಸಂ: ಹಿಂವಕ 109 ಬಿಎಂಎಸ್ 2019

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು